## ಜೆಎಸ್‌ಎಸ್ ಮಹಾವಿದ್ಯಾಪೀಠ
## ಜಗದ್ಗುರು ಶ್ರೀ ಶಿವರಾತ್ರೀಶ್ವರ ಧಾರ್ಮಿಕ ದತ್ತಿ, ಮೈಸೂರು

# ಜ್ಞಾನವಾರಿಧಿ–56

**ಡಿಜಿಟಲ್ ಸಾಪ್ತಾಹಿಕ ಉಪನ್ಯಾಸ ಕಾರ್ಯಕ್ರಮ**

**27 ಡಿಸೆಂಬರ್ 2021 * ಸೋಮವಾರ * ಸಂಜೆ 6.00**

**ದಿವ್ಯ ಸಾನ್ನಿಧ್ಯ**

**ಪರಮಪೂಜ್ಯ ಜಗದ್ಗುರು ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮಿಗಳು**

ಜಗದ್ಗುರು ಶ್ರೀ ವೀರಸಿಂಹಾಸನ ಮಹಾಸಂಸ್ಥಾನ ಮಠ

ಸುತ್ತೂರು ಶ್ರೀಕ್ಷೇತ್ರ

**ಉಪನ್ಯಾಸ**



**ಡಾ. ಶುಭಾ ಮರವಂತೆ**

ಸಹ ಪ್ರಾಧ್ಯಾಪಕರು

ಸಹ್ಯಾದ್ರಿ ವಾಣಿಜ್ಯ ಮತ್ತು ನಿರ್ವಹಣಾ ಕಾಲೇಜು, ಶಿವಮೊಗ್ಗ

**ವಿಷಯ : ಮಹಿಳೆ–ಸಮಾಜ–ಸಂಸ್ಕೃತಿ**

(ಉಪನ್ಯಾಸದ ನಂತರ ಆನ್‌ಲೈನ್‌ನಲ್ಲಿ ಬರುವ ಪ್ರಶ್ನೆಗಳಲ್ಲಿ ಆಯ್ದವುಗಳಿಗೆ ಉತ್ತರಿಸಲಾಗುವುದು)

**ಆನ್‌ಲೈನ್ ಮೂಲಕ ನೇರವಾಗಿ ವೀಕ್ಷಿಸಲು ಹಾರ್ದಿಕ ಸ್ವಾಗತ**

YouTube http://Youtube.com/c/JSSMahavidyapeethaonline

https://www.facebook.com/JSSMVP

ಜ್ಞಾನವಾರಿಧಿ ವಿಶೇಷ ಉಪನ್ಯಾಸ ಮಾಲೆ ಕಾರ್ಯಕ್ರಮವನ್ನು 2020ರ ಡಿಸೆಂಬರ್ ತಿಂಗಳಿನಿಂದ ಪ್ರತಿ ಸೋಮವಾರ ಏರ್ಪಡಿಸಿಕೊಂಡು ಬರಲಾಗುತ್ತಿದೆ. ಧರ್ಮ, ಅಧ್ಯಾತ್ಮ, ಯೋಗ, ಕಲೆ, ಸಾಹಿತ್ಯ, ಸಂಸ್ಕೃತಿ, ಆರೋಗ್ಯ, ಜೀವನಶೈಲಿ, ವಿಜ್ಞಾನ, ತಂತ್ರಜ್ಞಾನ ಮುಂತಾದ ವಿಷಯಗಳು ಮತ್ತು ಪ್ರಚಲಿತ ವಿದ್ಯಮಾನಗಳನ್ನು ಕುರಿತು ದೇಶ ಮತ್ತು ವಿದೇಶದ ವಿವಿಧ ಸಂಪನ್ಮೂಲ ವ್ಯಕ್ತಿಗಳಿಂದ ಉಪನ್ಯಾಸಗಳನ್ನು ಆಯೋಜಿಸಲಾಗುತ್ತಿದೆ.

**ಡಾ. ಶುಭಾ ಮರವಂತೆಯವರು** ಉತ್ತಮ ವಾಗ್ಮಿಗಳು ಹಾಗೂ ಬರಹಗಾರರು. ಉಡುಪಿ ಜಿಲ್ಲೆ ಮರವಂತೆ ಜನ್ಮಸ್ಥಳ. ಧಾರವಾಡದ ಕರ್ನಾಟಕ ವಿಶ್ವವಿದ್ಯಾಲಯದಿಂದ ಕನ್ನಡದಲ್ಲಿ ಸ್ನಾತಕೋತ್ತರ ಹಾಗೂ ಪಿಎಚ್‌ಡಿ ಪದವಿ, ಮೈಸೂರು ವಿಶ್ವವಿದ್ಯಾನಿಲಯದಿಂದ ಸಮೂಹ ಸಂವಹನ ಮತ್ತು ಪತ್ರಿಕೋದ್ಯಮ ವಿಷಯದಲ್ಲಿ ಸ್ನಾತಕೋತ್ತರ ಪದವಿ ಪಡೆದರು.

ಧಾರವಾಡದ ಕರ್ನಾಟಕ ಕಾಲೇಜಿನಲ್ಲಿ ಉಪನ್ಯಾಸಕರಾಗಿ ವೃತ್ತಿ ಆರಂಭಿಸಿದರು. ಪ್ರಸ್ತುತ ಶಿವಮೊಗ್ಗದ ಸಹ್ಯಾದ್ರಿ ಕಾಲೇಜಿನಲ್ಲಿ ಸಹ ಪ್ರಾಧ್ಯಾಪಕರಾಗಿ ಸೇವೆ ಸಲ್ಲಿಸುತ್ತಿದ್ದಾರೆ. ವಿದ್ಯಾರ್ಥಿ ದೆಸೆಯಿಂದಲೇ ಸಾಹಿತ್ಯದಲ್ಲಿ ಅಪಾರ ಆಸಕ್ತಿಯನ್ನು ಹೊಂದಿದ್ದಾರೆ. ಹತ್ತನೇ ತರಗತಿಯಲ್ಲಿದ್ದಾಗಲೇ 'ತೊದಲು' ಕವನ ಸಂಕಲನ, ಪಿಯುಸಿಯಲ್ಲಿ 'ಆತ್ಮರಾಜ ಮತ್ತು ಇತರ ಕಥೆಗಳು' ಕಥಾ ಸಂಕಲನವನ್ನು ಪ್ರಕಟಿಸಿದ್ದರು. ಪದ ಸಂತತಿ, ಕನಕದಾಸರ ಮಧ್ಯಕಾಲೀನ ಚರಿತೆಯ ಪುನರಚನೆ, ಮರಳಿ ಹೆಣ್ಣಿಗೆ ಸೇರಿದಂತೆ ಹಲವಾರು ಕೃತಿಗಳನ್ನು ರಚಿಸಿದ್ದಾರೆ. ಯಕ್ಷಗಾನ, ಗಮಕ, ನಾಟಕಗಳಲ್ಲಿ ಆಸಕ್ತಿ ಹೊಂದಿದ್ದು, ಅಭಿನಯ ಕೂಡ ಮಾಡುತ್ತಾರೆ. ಯಕ್ಷಗಾನದ ಭಾಗವತಿಕೆಯನ್ನು ಕಲಿತಿದ್ದಾರೆ. ಉದಯ ವಾಹಿನಿಯ ಹರಟೆ ಕಾರ್ಯಕ್ರಮದಲ್ಲಿ ಭಾಗವಹಿಸಿರುವರು. ಆಕಾಶವಾಣಿಯಲ್ಲಿ ನಿರೂಪಕರಾಗಿಯೂ ಕಾರ್ಯನಿರ್ವಹಿಸಿದ್ದಾರೆ. ರಾಜ್ಯ ಹಾಗೂ ರಾಷ್ಟ್ರಮಟ್ಟದಲ್ಲಿ ಸಾವಿರಕ್ಕೂ ಹೆಚ್ಚು ಉಪನ್ಯಾಸಗಳನ್ನು ನೀಡಿರುತ್ತಾರೆ.

ಮುಂಬೈನ ಸುಶೀಲಾ ಶೆಟ್ಟಿ ಕಥಾ ಪ್ರಶಸ್ತಿ, ವಿಶ್ವಕಲಾರತ್ನ ಪ್ರಶಸ್ತಿ, ಕರ್ನಾಟಕ ಸರ್ಕಾರದ ಕನಕದಾಸ ಫೆಲೋಶಿಪ್, ಶ್ರೀಮತಿ ಶೋಭಾ ಸುಂದರೇಶ್ ದತ್ತಿನಿಧಿ ಸಾಹಿತ್ಯ ಪ್ರಶಸ್ತಿ ಸೇರಿದಂತೆ ಹಲವಾರು ಪುರಸ್ಕಾರಗಳಿಗೆ ಭಾಜನರಾಗಿದ್ದಾರೆ.

**ಜ್ಞಾನವಾರಿಧಿ–57 * 3 ಜನವರಿ 2022**

**ಡಾ. ಎನ್. ಮುರಳೀಧರ್**

ಖ್ಯಾತ ವೈದ್ಯರು
ಚಿಕ್ಕಮಗಳೂರು

ವಿಷಯ : ರಕ್ತದಾನದ ಮಹತ್ವದ ಅರಿವು

**ಜ್ಞಾನವಾರಿಧಿ–58 * 10 ಜನವರಿ 2022**

**ಡಾ. ಸೀ.ಚ. ಯತೀಶ್ವರ**

ಮುಖ್ಯಸ್ಥರು, ಕನ್ನಡ ವಿಭಾಗ
ಎ.ವಿ. ಕಾಂತಮ್ಮ ಮಹಿಳಾ ಕಾಲೇಜು, ಹಾಸನ

ವಿಷಯ : ತತ್ತ್ವಪದಗಳಲ್ಲಿ ಅನುಭಾವ